# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 333(423) |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ.ರಾಥೋಡ್<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 22-12-2022. |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿ. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಜೈನ ಸಮುದಾಯದವರಿಗೆ 2012-13 ರಿಂದ 2015-16 ರವರೆಗೆ ಗಂಗಾ ಕಲ್ಯಾಣ ಯೋಜನೆಯಡಿ ಏತ ನೀರಾವರಿ ಸೌಲಭ್ಯವನ್ನು ಎಷ್ಟು ಜನರಿಗೆ ಕಲ್ಪಿಸಲಾಗಿದೆ; | ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2012-13 ರಿಂದ 2015-16 ರವರೆಗೆ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಜೈನ ಸಮುದಾಯದ 1808 ಜನರಿಗೆ ಗಂಗಾ ಕಲ್ಯಾಣ ಯೋಜನೆಯಡಿ ಏತ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗಿದೆ. |
| ಆ. | ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನಲ್ಲಿ ಕಾಮಗಾರಿ ಪೂರ್ಣಗೊಂಡು ಹಲವು ವರ್ಷಗಳು ಕಳೆದಿದ್ದರೂ ಹಣ ಬಿಡುಗಡೆಯಾಗದಿರುವುದಕ್ಕೆ ಕಾರಣಗಳೇನು: | ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನಲ್ಲಿ ನಿಗಮದಿಂದ 2012-13 ರಿಂದ 2015-16ನೇ ಸಾಲಿನವರೆಗೆ ಗಂಗಾ ಕಲ್ಯಾಣ ಯೋಜನೆಯಲ್ಲಿ ಏತ ನೀರಾವರಿ ಕಾರ್ಯ ಕ್ರಮದಡಿ ಒಟ್ಟು 57 ಕಾಮಗಾರಿಗಳಿಗೆ ರೂ.884.81 ಲಕ್ಷ ಮಂಜೂರಾಗಿದ್ದು, ರೂ.689.81ಲಕ್ಷ ಅನುದಾನ ನಿಗಮದಿಂದ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಬಿಡುಗಡೆಯಾಗಿದ್ದು, ರೂ.1,95,000 ಲಕ್ಷಗಳ ಅನುದಾನ ಬಿಡುಗಡೆಗೊಳಿಸಲು ಬಾಕಿ ಇರುತ್ತದೆ.<br><br>ನಿಗಮದಿಂದ ಕಾಮಗಾರಿಗಳ ಮಂಜೂರಾತಿಯೊಂದಿಗೆ ಶೇ.50 ರಷ್ಟು ಅನುದಾನವನ್ನು ಅನುಷ್ಠಾನ ಏಜೆನ್ಸಿಯಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಚಿಕ್ಕೋಡಿ ರವರಿಗೆ ಬಿಡುಗಡೆ ಮಾಡಲಾಗಿದೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಚಿಕ್ಕೋಡಿ ಇವರು ಸದರಿ ಬಿಡುಗಡೆಯಾದ ಅನುದಾನಕ್ಕೆ ಅನುಗುಣವಾಗಿ ಶೇ.90% ರಷ್ಟು ಕಾಮಗಾರಿಯನ್ನು ನಿರ್ವಹಿಸಿ ಹಿಂದೆ ಬಿಡುಗಡೆ ಮಾಡಿದ ಅನುದಾನಕ್ಕೆ ಉಪಯೋಗ ಪತ್ರದೊಂದಿಗೆ 2ನೇ ಕಂತಿನ ಶೇ.40% ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಬೇಕಾಗಿರುತ್ತದೆ. ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಕಾಮಗಾರಿ ಅನುಷ್ಠಾನ ಮಾಡಿದ ಮತ್ತು ಕಾಮಗಾರಿ ಪೂರ್ಣಗೊಂಡ ಬಗ್ಗೆ ಉಪಯೋಗ ಪತ್ರದೊಂದಿಗೆ (Utilization Certificate) 2ನೇ ಕಂತಿನ ಅನುದಾನಕ್ಕೆ ಪ್ರಸ್ತಾವನೆಯು ಸೂಕ್ತ ಸಮಯಕ್ಕೆ ಬಾರದಿರುವುದರಿಂದ ಅನುದಾನ ಬಿಡುಗಡೆ ಮಾಡಲು ವಿಳಂಬವಾಗಿರುತ್ತದೆ. |

......2

| | | |
|---|---|---|
| ಇ. | ಹಣ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ವಿಳಂಬ ಧೋರಣೆ ತೋರುತ್ತಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗ ಮತ್ತು ಜಿಲ್ಲಾ ವ್ಯವಸ್ಥಾಪಕರಿಗೆ ಬಾಕಿ ಇರುವ ಪ್ರಸ್ತಾವನೆಗಳನ್ನು ಸಲ್ಲಿಸಲು ಈಗಾಗಲೇ ಸೂಚಿಸಲಾಗಿದ್ದು, ಬಾಕಿ ಇರುವ ಅನುದಾನವನ್ನು ಬಿಡುಗಡೆ ಮಾಡಲು ಕೂಡಲೇ ಕ್ರಮ ವಹಿಸಲಾಗುವುದು. |

**ಸಂಖ್ಯೆ: MWD 282 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ